# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ದಿನಾಂಕ : 03.07.2026

**ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಧಿಸೂಚಿಸಲಾದ ವಿವಿಧ ಇಲಾಖೆ/ನಿಗಮ/ಮಂಡಳಿಗಳ ಗ್ರೂಪ್–ಎ & ಬಿ ಹುದ್ದೆಗಳಿಗೆ ಮತ್ತು ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ನಡೆಸುವ ಸಂಬಂಧ ಪರೀಕ್ಷಾ ವೇಳಾಪಟ್ಟಿ**

ಸಂಖ್ಯೆ: ಇಡಿ/ಕೆಇಎ/ನೇ.ವಿ/11/2026 (ಆರ್.ಪಿ.ಸಿ) ದಿನಾಂಕ: 20.05.2026
ಸಂಖ್ಯೆ: ಇಡಿ/ಕೆಇಎ/ನೇ.ವಿ/12/2026 (ಕೆ.ಕೆ) ದಿನಾಂಕ: 20.05.2026
ಸಂಖ್ಯೆ : ಸಂಖ್ಯೆ: ಇಡಿ/ಕೆಇಎ/ನೇಮಕಾತಿ/ಸಿಆರ್–15/2026 ದಿನಾಂಕ: 05.06.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 20.05.2026ರಂದು ಅಧಿಸೂಚನೆ ಹೊರಡಿಸಿ, ವಿವಿಧ ಇಲಾಖೆ/ನಿಗಮ/ಮಂಡಳಿಗಳ ಗ್ರೂಪ್–ಎ ಹಾಗೂ ಗ್ರೂಪ್–ಬಿ ಹುದ್ದೆಗಳಿಗೆ ಮತ್ತು ದಿನಾಂಕ 05.06.2026ರ ಪತ್ರಿಕಾ ಪ್ರಕಟಣೆಯಂತೆ ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 102 ಸೇವನೆ 2022 ದಿನಾಂಕ 18.03.2025 ರಂತೆ, ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ; ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ; ಎಸ್.ಎಸ್.ಎಲ್.ಸಿ.ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ, ಅಥವಾ; ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ, ಅಥವಾ; ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಿ ಸದರಿ ಅಭ್ಯರ್ಥಿಗಳನ್ನು ಹೊರತು ಪಡಿಸಿ ಉಳಿದ ಅನ್ವಯವಾಗುವ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಬೇಕಾಗಿರುತ್ತದೆ.

**ಕನ್ನಡ ಭಾಷಾ ಪರೀಕ್ಷೆಯ ವೇಳಾಪಟ್ಟಿಯು ಈ ಕೆಳಗಿನಂತಿದೆ.**

| ದಿನಾಂಕ | ವಿಷಯ | ಸಮಯ | ಗರಿಷ್ಠ ಅಂಕಗಳು | ಒಟ್ಟು ಪ್ರಶ್ನೆಗಳು |
|---|---|---|---|---|
| 19.07.2026 (ಭಾನುವಾರ) | ಕನ್ನಡ ಭಾಷಾ ಪರೀಕ್ಷೆ | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ವರೆಗೆ | 150 | 100 |

ಕಾರ್ಯನಿರ್ವಾಹಕ ನಿರ್ದೇಶಕರು

**ಸೂಚನೆ:**

1. ಪ್ರತಿ ಪ್ರಶ್ನೆಗೆ 1.5 ಅಂಕಗಳಿದ್ದು, ಎಲ್ಲಾ ಪ್ರಶ್ನೆಗಳಿಗೆ ಸಮಾನ ಅಂಕಗಳಿರುತ್ತದೆ.
2. ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿಯದ್ದಾಗಿರುತ್ತದೆ.
3. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಲು ಅನ್ವಯಿಸುವ ಅಭ್ಯರ್ಥಿಗಳಿಗೆ ಕನಿಷ್ಠ 50 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.
4. ಅಭ್ಯರ್ಥಿಯು ಕನ್ನಡ ಭಾಷಾ ಪರೀಕ್ಷೆಯು ಕೇವಲ ಅರ್ಹತಾ ಪರೀಕ್ಷೆಯಾಗಿದ್ದು, ಅರ್ಹತೆ ಹೊಂದದ ಹೊರತು ಹುದ್ದೆಯ ಆಯ್ಕೆಗೆ ಅರ್ಹರಾಗುವುದಿಲ್ಲ.
5. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಂಕಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.
6. ಋಣಾತ್ಮಕ ಮೌಲ್ಯಮಾಪನವಿರುವುದಿಲ್ಲ.


18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012

18th Cross, Sampige Road, Malleshwaram, Bengaluru - 560 012.

Phone: 080 - 23 564 583 Helpline : 080 - 23 460 460.

e-mail : keauthority-ka@nic.in Website : http://kea.kar.nic.in